**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:**- ಉತ್ತರ ಕನ್ನಡ ಜಿಲ್ಲೆಯ ಮುಂಡಗೋಡ ತಾಲ್ಲೂಕಿನ 05 ಗ್ರಾಮ ಪಂಚಾಯಿತಿಗಳಲ್ಲಿ ಬರುವ 84 ಸಣ್ಣ ನೀರಾವರಿ/ಜಿಲ್ಲಾ ಪಂಚಾಯತ್ ಕೆರೆಗಳನ್ನು ಬೇಡ್ತಿ ನದಿಯ ಉಪ ನದಿಯಾದ ಕವಳಗಿಹಳ್ಳದಿಂದ ತುಂಬಿಸುವ ಯೋಜನೆಯ ರೂ.225.00 ಕೋಟಿಗಳ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

****

**ಓದಲಾಗಿದೆ :**- ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನಿರಾವರಿ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ: ಕನೀನಿ/ಮ.ಯೋ.ವ/ಮುಂಡಗೋಡ/49/2019-20/3949 ದಿನಾಂಕ: 02/11/2019 ಮತ್ತು 4143 ದಿನಾಂಕ:08/11/2019.

**ಪ್ರಸ್ತಾವನೆ:-**

ಮೇಲೆ ಓದಲಾದ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಇವರು ಉತ್ತರ ಕನ್ನಡ ಜಿಲ್ಲೆಯ ಮುಂಡಗೋಡ ತಾಲೂಕಿನ 05 ಗ್ರಾಮ ಪಂಚಾಯಿತಿಗಳಲ್ಲಿ ಬರುವ 84 ಸಣ್ಣ ನೀರಾವರಿ/ಜಿಲ್ಲಾ ಪಂಚಾಯತ್ ಕೆರೆಗಳನ್ನು ಬೇಡ್ತಿ ನದಿಯ ಉಪ ನದಿಯಾದ ಕವಳಗಿಹಳ್ಳದಿಂದ ತುಂಬಿಸುವ ಯೋಜನೆಯ ರೂ.225.00ಕೋಟಿಗಳ ಯೋಜನಾ ವರದಿಗೆ ಎಸ್.ಸಿ.ಪಿ./ಟಿ.ಎಸ್.ಪಿ. ಅನುದಾನದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಉತ್ತರ ಕನ್ನಡ ಜಿಲ್ಲೆಯ ಮುಂಡಗೋಡ ತಾಲ್ಲೂಕಿನ 5 ಗ್ರಾಮ ಪಂಚಾಯಿತಿಗಳ (ಮಳಗಿ, ಪಾಳ, ಕಾತೂರು, ಕೋಡಂಬಿ ಹಾಗೂ ಓಣಿಕೇರಿ) 84 ಸಣ್ಣ ನೀರಾವರಿ/ಜಿಲ್ಲಾ ಪಂಚಾಯತ್ ಕೆರೆಗಳಲ್ಲಿ ಮಳೆಯ ಅಭಾವದಿಂದ ನಿಗದಿತ ಪ್ರಮಾಣದಲ್ಲಿ ನೀರಿನ ಸಂಗ್ರಹಣೆಯಾಗದೇ ಜನ ಮತ್ತು ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆಯಾದ ಹಿನ್ನೆಲೆಯಲ್ಲಿ, ಸದರಿ ಕೆರೆಗಳನ್ನು ಅವುಗಳ ಸಾಮರ್ಥ್ಯದ ಆಧಾರದ ಮೇಲೆ (ಶೇ.50 ತುಂಬಿಸುವುದು+ಶೇ.25 ನಷ್ಟವನ್ನು ಒಳಗೊಂಡಂತೆ) ತುಂಬಿಸಿ ಈ ಭಾಗದ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಬವಣೆಯನ್ನು ನೀಗಿಸಲು ಮತ್ತು ಅಂತರ್ಜಲ ಮಟ್ಟ ವೃದ್ಧಿಸುವ ಸಲುವಾಗಿ ಅವಶ್ಯವಿರುವ 0.20 ಟಿ.ಎಂ.ಸಿ. ನೀರನ್ನು ತುಂಬಿಸುವ ರೂ.225.00 ಕೋಟಿಗಳ ಯೋಜನೆಯನ್ನು ಕೈಗೆತ್ತಿಕೊಳ್ಳಲು ವ್ಯವಸ್ಥಾಪಕ ನಿರ್ದೇಶಕರು ವರದಿ ಮಾಡಿರುತ್ತಾರೆ.

ಸದರಿ ಯೋಜನೆಯ ಒಟ್ಟು 8292ಎಕರೆ 35 ಗುಂಟೆ ಅಚ್ಚುಕಟ್ಟು ಪ್ರದೇಶದ ಪೈಕಿ, 2736 ಎಕರೆ 37 ಗುಂಟೆ (33%) ರಷ್ಟು ಭೂಮಿ ಪರಿಶಿಷ್ಠ ಜಾತಿ ಹಾಗೂ 1658 ಎಕರೆ 39 ಗುಂಟೆ (23%) ರಷ್ಟು ಭೂಮಿಯು ಪರಿಶಿಷ್ಠ ಪಂಗಡಗಳ ಜನರಿಗೆ ಸೇರಿದ್ದು, ಈ ಯೋಜನೆಯನ್ನು ಕಾರ್ಯಗತಗೊಳಿಸುವುದರಿಂದ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರಿಗೆ ಅನುಕೂಲವಾಗುವುದು ಎಂದು ವ್ಯವಸ್ಥಾಪಕ ನಿರ್ದೇಶಕರು ವರದಿ ಮಾಡಿರುತ್ತಾರೆ.

ಮುಂದುವರೆದು, ಸದರಿ ವಿಷಯವನ್ನು ದಿನಾಂಕ:24/10/2019ರಂದು ಜರುಗಿದ ಕರ್ನಾಟಕ ನೀರಾವರಿ ನಿಗಮ ನಿಯಮಿತದ ನಿರ್ದೇಶಕರ ಮಂಡಳಿ ಸಭೆಯಲ್ಲಿ ಮಂಡಿಸಲಾಗಿದ್ದು, ಮಂಡಳಿಯು ಬೇಡ್ತಿ ನದಿಯ ಉಪ ನದಿಯಾದ ಕವಳಗಿಹಳ್ಳದಿಂದ 0.20 ಟಿ.ಎಂ.ಸಿ. ನೀರನ್ನು ಎತ್ತಿ 84 ಸಣ್ಣ ನೀರಾವರಿ/ಜಿಲ್ಲಾ ಪಂಚಾಯುತ್ ಕೆರೆಗಳನ್ನು ತುಂಬಿಸುವ ಯೋಜನೆಯ ರೂ.225.00ಕೋಟಿಗಳ ಯೋಜನಾ ವರದಿಯ ಪ್ರಸ್ತಾವನೆಗೆ ಅನುಮೋದನೆ ನೀಡಿ ಆಡಳಿತಾತ್ಮಕ ಅನುಮೋದನೆ ಪಡೆಯಲು ಶಿಫಾರಸ್ಸು ಮಾಡಲಾಗಿದೆ.

ಸನ್ಮಾನ್ಯ ಮುಖ್ಯಮಂತ್ರಿಗಳು ಉತ್ತರ ಕನ್ನಡ ಜಿಲ್ಲೆಯ ಮುಂಡಗೋಡ ತಾಲ್ಲೂಕಿನ 05 ಗ್ರಾಮ ಪಂಚಾಯಿತಿಗಳಲ್ಲಿ ಬರುವ 84 ಸಣ್ಣ ನೀರಾವರಿ / ಜಿಲ್ಲಾ ಪಂಚಾಯತ್ ಕೆರೆಗಳನ್ನು ಬೇಡ್ತಿ ನದಿಯ ಉಪ ನದಿಯಾದ ಕವಳಗಿಹಳ್ಳದಿಂದ ತುಂಬಿಸುವ ಯೋಜನೆಯ ರೂ.225.00 ಕೋಟಿಗಳ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡಿ, ಹಂತ ಹಂತವಾಗಿ ಯೋಜನೆಯನ್ನು ಅನುಷ್ಠಾನಗೊಳಿಸುವ ಷರತ್ತಿಗೊಳಪಟ್ಟು

ಪ್ರಸ್ತುತ ಆಯವ್ಯಯದಲ್ಲಿನ ಘೋಷಣೆಯಂತೆ ಪ್ರಸ್ತುತ ಸಾಲಿಗೆ ರೂ.40.00 ಕೋಟಿ ವೆಚ್ಚ ಭರಿಸಲು ಹಾಗೂ ಉಳಿದ ವೆಚ್ಚವನ್ನು ಪ್ರಸಕ್ತ ಸಾಲಿನಲ್ಲಿ ಜಲ ಸಂಪನ್ಮೂಲ ಇಲಾಖೆಗೆ ಎಸ್.ಸಿ.ಪಿ/ಟಿ.ಎಸ್.ಪಿ. ಯೋಜನೆಗೆ ನಿಗದಿಪಡಿಸಿರುವ ಒಟ್ಟು ಅನುದಾನದಲ್ಲಿ ಸದರಿ ಯೋಜನೆಯನ್ನು ಕೈಗೊಳ್ಳುವ ಷರತ್ತಿಗೊಳಪಟ್ಟು ರಾಜ್ಯ ಪರಿಷತ್ತಿನ ಘಟನೋತ್ತರ ಮಂಜೂರಾತಿ ಪಡೆಯಲು ಅನುಮೋದಿಸಿರುವುದರಿಂದ ಸದರಿ ಯೋಜನೆಗೆ ಮಂಜೂರಾತಿ ಆದೇಶ ಹೊರಡಿಸಿ, ಸ್ಥಿರೀಕರಣಕ್ಕಾಗಿ ಮುಂದಿನ ಸಚಿವ ಸಂಪುಟದ ಮುಂದೆ ಮಂಡಿಸಲು ಅನುಮೋದಿಸಿರುತ್ತಾರೆ.

ಅದರಂತೆ, ಪ್ರಸ್ತಾವನೆಯಲ್ಲಿನ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಜಸಂಇ 32 ಎಂಪಿಜಡ್ 2019, ಬೆಂಗಳೂರು, ದಿನಾಂಕ:08/11/2019.**

ಉತ್ತರ ಕನ್ನಡ ಜಿಲ್ಲೆಯ ಮುಂಡಗೋಡ ತಾಲ್ಲೂಕಿನ 05 ಗ್ರಾಮ ಪಂಚಾಯಿತಿಗಳಲ್ಲಿ ಬರುವ 84 ಸಣ್ಣ ನೀರಾವರಿ/ಜಿಲ್ಲಾ ಪಂಚಾಯತ್ ಕೆರೆಗಳನ್ನು ಬೇಡ್ತಿ ನದಿಯ ಉಪ ನದಿಯಾದ ಕವಳಗಿ ಹಳ್ಳದಿಂದ 0.20 ಟಿ.ಎಂ.ಸಿ. ನೀರನ್ನು ಎತ್ತಿ ಕೆರೆಗಳನ್ನು ತುಂಬಿಸುವ ರೂ.225.00 ಕೋಟಿಗಳ (ರೂಪಾಯಿ ಎರಡು ನೂರಾ ಇಪ್ಪತ್ತೈದು ಕೋಟಿಗಳು ಮಾತ್ರ) ಮೊತ್ತದ ಯೋಜನೆಯನ್ನು ಹಂತ ಹಂತವಾಗಿ ಅನುಷ್ಠಾನಗೊಳಿಸುವ ಷರತ್ತಿಗೊಳಪಟ್ಟು, 2019-20ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ಪ್ರಸಕ್ತ ಸಾಲಿನಲ್ಲಿ ರೂ.40.00 ಕೋಟಿ ವೆಚ್ಚ ಭರಿಸಲು ಹಾಗೂ ಉಳಿದ ವೆಚ್ಚವನ್ನು ಜಲ ಸಂಪನ್ಮೂಲ ಇಲಾಖೆಗೆ ಒಟ್ಟಾರೆಯಾಗಿ ಹಂಚಿಕೆ ಆಗಿರುವ ಎಸ್.ಸಿ.ಪಿ/ಟಿ.ಎಸ್.ಪಿ. ಅನುದಾನದಲ್ಲಿ ಬಳಸಲು ಆಡಳಿತಾತ್ಮಕ ಅನುಮೋದನೆ ನೀಡಿದೆ.

ಈ ಆದೇಶವನ್ನು ಕರ್ನಾಟಕ ಸರ್ಕಾರದ (ಕಾರ್ಯಕಲಾಪಗಳ ನಿರ್ವಹಣೆ) ನಿಯಮಗಳು, 1977ರ 17ನೇ ನಿಯಮದ (2)ನೇ ಉಪ ನಿಯಮದ ಪರಂತುಕದ ವ್ಯಾಪ್ತಿಯೊಳಗೆ ಬರುತ್ತದೆ ಮತ್ತು ಅದರಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಿ. ಹರಿನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-5)
ಜಲ ಸಂಪನ್ಮೂಲ ಇಲಾಖೆ

( ಬಿ. ಹರಿನಾರಾಯಣ )
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-5)
ಜಲಸಂಪನ್ಮೂಲ ಇಲಾಖೆ
ಕೊಠಡಿ ಸಂಖ್ಯೆ 316, 3ನೇ ಮಹಡಿ
ವಿಕಾಸಸೌಧ, ಬೆಂಗಳೂರು - 560 001

ಪ್ರತಿಯನ್ನು:

1. ಮಹಾಲೇಖಪಾಲರು (ಎ&ಇ)/(ಇ&ಆರ್ಎಸ್ಎ)/(ಜಿ&ಎಸ್ಎಸ್ಎ), ಕರ್ನಾಟಕ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಜಲ ಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಮಲಪ್ರಭಾ ಯೋಜನಾ ವಲಯ, ಧಾರವಾಡ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು,
7. ಸರ್ಕಾರದ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
8. ಹೆಚ್ಚುವರಿ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ ಇವರ ಆಪ್ತ ಸಹಾಯಕರು.
9. ವಿಶೇಷಾಧಿಕಾರಿ ಹಾಗೂ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋಇ-ಆಕೋ) ವಿಧಾನ ಸೌಧ, ಬೆಂಗಳೂರು.
10. ತಾಂತ್ರಿಕ ಸಹಾಯಕರು, (ತಾಂತ್ರಿಕ-6) ಜಲ ಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು
11. ಶಾಖಾ ರಕ್ಷಕ ಕಡತ/ ಹೆಚ್ಚಿನ ಪ್ರತಿಗಳು.